# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಕೆ.ಹರೀಶ್ ಕುಮಾರ್ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 227 |
| ಉತ್ತರಿಸಬೇಕಾದ ದಿನಾಂಕ | : | 02.02.2021 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ನಂದಿನಿ ಬೂತ್‌ಗಳು ಎಷ್ಟು; ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿರುವ ಒಟ್ಟು ಬೂತ್‌ಗಳು ಎಷ್ಟು; | ರಾಜ್ಯದಲ್ಲಿ ಒಟ್ಟು 1833 ನಂದಿನಿ ಪಾರ್ಲರ್/ಫ್ರಾಂಚೈಸಿಗಳಿವೆ. ನಗರ ಪ್ರದೇಶದಲ್ಲಿ 1519 ಹಾಗೂ ಗ್ರಾಮೀಣ ಪ್ರದೇಶದಲ್ಲಿ 314 ಬೂತ್ ಗಳಿರುತ್ತವೆ |
| ಆ) | ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಂದಿನಿ ಪಾರ್ಲರ್/ನಂದಿನಿ ಬೂತ್‌ಗಳ ಫ್ರಾಂಚೈಸಿಯನ್ನು ಪಡೆಯುವುದು ಹೇಗೆ; ಅದಕ್ಕೆ ಇರುವ ಮಾನದಂಡ ಗಳೇನು; ಫ್ರಾಂಚೈಸಿಯನ್ನು ಪಡೆಯುವವರಿಗೆ ಸಿಗುವ ಸೌಲಭ್ಯಗಳೇನು; | ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಮಾತ್ರ ಮಾರಾಟ ಮಾಡುವ ಸ್ಥಳಗಳಿಗೆ ಬೂತ್, ಫ್ರಾಂಚೈಸಿ ಅಥವಾ ಪಾರ್ಲರ್ ಗಳೆಂದು ಕರೆಯಲಾಗುವುದು.<br><br>1. ಜನಸಂಖ್ಯೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ರೀಟೇಲ್ ದರದಲ್ಲಿ ಪೂರೈಸಲು ಕ್ರಮಕೈಗೊಳ್ಳಲಾಗುತ್ತಿದೆ.<br>2. ಸ್ಥಳಿಯ ಪ್ರದೇಶದಲ್ಲಿರುವ ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನ ಮಾರಾಟ ಮಾಡಲು ಅಸಕ್ತರನ್ನು ಗುರುತಿಸಲಾಗುವುದು, ಹಾಗೂ ಕೆಲವೊಮ್ಮೆ ನೇರವಾಗಿ ಆಸಕ್ತರು ಅರ್ಜಿಗಳನ್ನು ನೀಡಿದಲ್ಲಿ ಪರಿಶೀಲಿಸಿ ಅಗತ್ಯ ಕ್ರಮವಿಡಲಾಗುವುದು.<br>3. ಅರ್ಜಿದಾರರ ಮಾರಾಟ ಕೌಶಲ್ಯತೆ ಸ್ಥಳಿಯ ಜನಸಾಮಾನ್ಯರೊಂದಿಗೆ ಒಡನಾಟ ಹಾಗೂ ಬಂಡವಾಳವನ್ನು ಭರಿಸುವ ಸಾಮರ್ಥ್ಯಕ್ಕೆ ಅನುಗುಣವಾಗಿ ನೇಮಕ ಮಾಡಲಾಗುವುದು.<br>4. ಆಸಕ್ತರು ಆಯ್ದ ಸ್ಥಳಗಳಲ್ಲಿ ಬಂಡವಾಳ ಹೂಡಿ ಇತರೆ ಉತ್ಪನ್ನಗಳೊಂದಿಗೆ ನಂದಿನಿ ಉತ್ಪನ್ನಗಳನ್ನು ಮಾರಾಟ ಮಾಡಬೇಕಾಗುತ್ತದೆ.<br>5. ಪಾರ್ಲರ್/ಫ್ರಾಂಚೈಸಿಗಳಿಗೆ ಬ್ರಾಂಡಿಂಗ್‌ಅನ್ನು ಮಾಡಿಸುವುದು ಹಾಗೂ ರಿಯಾಯತಿ ದರದಲ್ಲಿ ಫ್ರೀಜರ್ ಮತ್ತು ಕೂಲರ್ ವ್ಯವಸ್ಥೆ ಹಾಲು ಒಕ್ಕೂಟಗಳು ಹಾಗೂ ಕೆ.ಎಂ.ಎಫ್ ಸಂಸ್ಥೆಯಿಂದ ಮಾಡಲಾಗುವುದು. |
| ಇ) | ಎಷ್ಟು ಕಿ.ಮೀ.ಗೆ ಒಂದರಂತೆ ನಂದಿನಿ ಬೂತ್‌ಗಳನ್ನು ಸ್ಥಾಪಿಸಬಹುದು ಇದಕ್ಕೆ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿರುವ ಮಾನದಂಡಗಳೇನು? | ನಗರ ಪ್ರದೇಶಗಳಲ್ಲಿ ಒಂದು ಅಥವಾ ಎರಡು ಕಿ.ಮೀ.ಗೆ ಒಂದರಂತೆ ಆಯಾ ಸ್ಥಳದ ಬೇಡಿಕೆ ಮತ್ತು ಜನಸಂಖ್ಯೆ ಆಧಾರದ ಮೇಲೆ ನಂದಿನಿ ಬೂತ್ ಸ್ಥಾಪಿಸಲು ಕ್ರಮಕೈಗೊಳ್ಳಲಾಗುವುದು. |

ಸಂಖ್ಯೆ: ಸಿಒ 15 ಸಿಸಿಬಿ 2021

ಎಸ್.ಟಿ. ಸೋಮಶೇಖರ್

(ಎಸ್.ಟಿ. ಸೋಮಶೇಖರ್)

ಸಹಕಾರ ಸಚಿವರು